**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **1096** |
| **ಸದಸ್ಯರ ಹೆಸರು** | : | **ಶ್ರೀ ಹೆಚ್. ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** |
| **ಉತ್ತರಿಸಬೇಕಾದ ದಿನಾಂಕ** | : | **20.08.2025 (ವರ್ಗಾವಣೆಗೊಂಡ ಪ್ರಶ್ನೆ)** |
| **ಉತ್ತರಿಸಬೇಕಾದ ಸಚಿವರು** | : | **ಉಪ ಮುಖ್ಯಮಂತ್ರಿಯವರು** |

*******

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಪೆರಿಫೆರಲ್ 1 ರಿಂಗ್ ರೋಡ್ ಪ್ರಾರಂಭವಾಗಿದ್ದು ಯಾವಾಗ; ಪ್ರಸ್ತುತ ಕಾಮಗಾರಿ ಯಾವ ಹಂತದಲ್ಲಿದೆ;(ವಿವರ ನೀಡುವುದು) | • ಬೆಂಗಳೂರು ಬ್ಯುಸಿನೆಸ್ ಕಾರಿಡಾರ್ (ಪಿ.ಆರ್.ಆರ್. ಭಾಗ-1) ಯೋಜನೆಗೆ ಭೂಸ್ವಾಧೀನ ಪ್ರಕ್ರಿಯೆ ದಿನಾಂಕ:23.09.2005 ರಿಂದ ಪ್ರಾರಂಭವಾಗಿರುತ್ತದೆ.<br>• ಭೂಸ್ವಾಧೀನಪಡಿಸಿಕೊಳ್ಳುವ ಜಮೀನಿನ ಭೂಮಾಲೀಕರಿಗೆ ಸಂಧಾನಿತ ದರ ನಿಗದಿಪಡಿಸುವ ಹಂತದಲ್ಲಿರುತ್ತದೆ. |
| ಆ | ಪೆರಿಫೆರಲ್ 1 ರಿಂಗ್ ರೋಡ್ ರಸ್ತೆಯ ಉಪಯೋಗಕ್ಕಾಗಿ ರೈತರಿಂದ ಎಷ್ಟು ಎಕರೆ ಜಮೀನನ್ನು ಭೂಸ್ವಾಧೀನ ವಶಪಡಿಸಿಕೊಳ್ಳಲಾಗಿದೆ; | • ಸದರಿ ರಸ್ತೆಯ ಭೂಸ್ವಾಧೀನಕ್ಕೆ ಸಂಬಂಧಿಸಿದಂತೆ ದಿನಾಂಕ: 29.06.2007 ರಂದು 1810 ಎಕರೆ 18.50 ಗುಂಟೆ ವಿಸ್ತೀರ್ಣದ ಜಮೀನಿಗೆ ಅಂತಿಮ ಅಧಿಸೂಚನೆ ಹೊರಡಿಸಲಾಗಿರುತ್ತದೆ.<br>• ದಿನಾಂಕ:18.04.2022 ರಂದು 608 ಎಕರೆ 8.25 ಗುಂಟೆ ವಿಸ್ತೀರ್ಣದ ಜಮೀನಿಗೆ ಪ್ರಾಥಮಿಕ ಅಧಿಸೂಚನೆ ಹೊರಡಿಸಲಾಗಿದೆ. |
| ಇ | ರೈತರ ಜಮೀನನ್ನು ವಶಪಡಿಸಿಕೊಳ್ಳಲು ಇರುವ ಮಾನದಂಡಗಳೇನು; | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಕಾಯ್ದೆ 1976 ರನ್ವಯ ಭೂಸ್ವಾಧೀನ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. |
| ಈ | ಪೆರಿಫೆರಲ್ ರಿಂಗ್ ರೋಡ್ ಕಾಮಗಾರಿಯು ಯಾವ ಕಾಲಮಿತಿಯೊಳಗೆ ಮುಕ್ತಾಯವಾಗುವುದು ಮತ್ತು ಈ ಕಾರ್ಯವು ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಯಾವ ಕ್ರಮ ಕೈಗೊಳ್ಳಲಾಗಿದೆ? (ವಿವರ ನೀಡುವುದು) | ಬೆಂಗಳೂರು ಬ್ಯುಸಿನೆಸ್ ಕಾರಿಡಾರ್ (ಪಿ.ಆರ್.ಆರ್.-1) ರಸ್ತೆಗೆ ಅಗತ್ಯವಾದ ಜಮೀನನ್ನು ಭೂಸ್ವಾಧೀನಪಡಿಸಿಕೊಳ್ಳುವ ಪ್ರಕ್ರಿಯೆಯು ಪ್ರಗತಿಯಲ್ಲಿದ್ದು, ಸದರಿ ಭೂಸ್ವಾಧೀನ ಪ್ರಕ್ರಿಯೆಯು ಮುಕ್ತಾಯವಾದ ನಂತರ ಕಾಮಗಾರಿಯನ್ನು ಕೈಗೊಳ್ಳಲಾಗುವುದು. |

**ಸಂಖ್ಯೆ**: ನಅಇ 533 ಬೆಂಭೂಸ್ವಾ 2025

**(ಡಿ.ಕೆ. ಶಿವಕುಮಾರ್)**
ಉಪ ಮುಖ್ಯಮಂತ್ರಿ